# ಸಿಬ್ಬಂದಿ ನೇರ ನೇಮಕಾತಿ ಪ್ರಕಟಣೆಯ ವಿವರಗಳು

**ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘ (ನಿ.) ಪಡೀಲ್ ಮಂಗಳೂರು ಇಲ್ಲಿ ಖಾಲಿ ಇರುವ ಈ ಕೆಳಕಂಡ ವಿವಿಧ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

**ಹುದ್ದೆಗಳ ವಿವರ ಹಾಗೂ ವೇತನ ಶ್ರೇಣಿ :**

| ಕ್ರ.ಸಂ | ಹುದ್ದೆಯ ವಿವರ | ಹುದ್ದೆಯ ಸಂಖ್ಯೆ | ವೇತನ ಶ್ರೇಣಿ |
|---|---|---|---|
| 1. | ಕಚೇರಿ ಅಧೀಕ್ಷಕರು/ ಮಾನವ ಸಂಪನ್ಮೂಲಾಧಿಕಾರಿ | 01 | 30,350.00-58,250.00 |
| 2. | ಲೆಕ್ಕಿಗರು | 02 | 27,650.00-52,650.00 |
| 3. | ಶಾಖಾ ವ್ಯವಸ್ಥಾಪಕರು/ಶಾಖಾಧಿಕಾರಿ | 13 | 23,500.00-47,650.00 |
| 4. | ಹಿರಿಯ ಗುಮಾಸ್ತರು | 02 | 21,400.00-42,000.00 |
| 5. | ಕಿರಿಯ ಗುಮಾಸ್ತರು | 41 | 19,950.00-37,900.00 |
| 6. | ವಾಹನ ಚಾಲಕರು | 01 | 18,600.00-32,600.00 |
| 7. | ಕಚೇರಿ ಸಹಾಯಕರು | 02 | 17,000.00-28,950.00 |

- ಅರ್ಜಿಗಳನ್ನು ವಿತರಿಸುವ ದಿನಾಂಕ: 20.06.2024 ರಿಂದ
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 05.07.2024 (ಸಾಯಂಕಾಲ 5.00 ಗಂಟೆಯೊಳಗೆ)

1. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದ್ದಲ್ಲಿ, ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ, ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸತಕ್ಕದ್ದು.
2. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.
3. ಭರ್ತಿ ಮಾಡಿದ ಅರ್ಜಿಗಳನ್ನೊಳಗೊಂಡ ಲಕೋಟೆಯನ್ನು ಅಂಚೆ ಮೂಲಕ ದಿನಾಂಕ 05-07-2024ರ ಸಂಜೆ 5.00 ಗಂಟೆಯೊಳಗೆ ಸಂಘದ ಪ್ರಧಾನ ಕಚೇರಿಗೆ ತಲುಪುವಂತೆ ಇರಬೇಕು. ನಿಗದಿತ ದಿನಾಂಕ ಮತ್ತು ಸಮಯದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಕಡ್ಡಾಯವಾಗಿ ನೀಡಿರುವ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
5. **ಶುಲ್ಕ :-** ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ. 100/- +ಜಿ.ಎಸ್.ಟಿ ರೂ.18/- ಒಟ್ಟು ರೂ.118/-ನ್ನು ಪಾವತಿಸಿ ಸಂಘದ ಕೇಂದ್ರ ಕಛೇರಿಯಿಂದ ಅರ್ಜಿಯನ್ನು ಪಡೆಯತಕ್ಕದ್ದು.
   ಅರ್ಜಿ ಶುಲ್ಕವನ್ನು ನಗದಾಗಿ ಅಥವಾ ATHMASHAKTHI MULTIPURPOSE CO OPERATIVE SOCIETY LTD MANGALORE ರವರ ಹೆಸರಿಗೆ ಯಾವುದಾದರೂ ವಾಣಿಜ್ಯ ಬ್ಯಾಂಕು ಅಥವಾ ಸಹಕಾರಿ ಬ್ಯಾಂಕುಗಳಿಂದ ಪಡೆಯಲಾದ ಡಿ.ಡಿ. ಮುಖಾಂತರ ಪಾವತಿಸಿ ಅರ್ಜಿಯನ್ನು ಪಡಕೊಳ್ಳುವುದು.
6. ಅರ್ಜಿಯನ್ನು ಸಲ್ಲಿಸುವಾಗ ಅರ್ಜಿಯ ಜೊತೆ ಕಚೇರಿ ಅಧೀಕ್ಷಕರು/ಮಾನವ ಸಂಪನ್ಮೂಲಾಧಿಕಾರಿ, ಲೆಕ್ಕಿಗರು ಹುದ್ದೆಗೆ ಸಂಘದ ಹೆಸರಿನಲ್ಲಿ ರೂ. 1000/- +ಜಿ.ಎಸ್.ಟಿ ರೂ.180/- ಒಟ್ಟು ರೂ.1180/-ನ್ನು ಮತ್ತು ಶಾಖಾಧಿಕಾರಿ/ವ್ಯವಸ್ಥಾಪಕರು, ಹಿರಿಯ ಗುಮಾಸ್ತರು, ಕಿರಿಯ ಕುಮಾಸ್ತರು ಹುದ್ದೆಗೆ ರೂ. 500/- +ಜಿ.ಎಸ್.ಟಿ ರೂ.90/- ಒಟ್ಟು ರೂ.590/-ನ್ನು ಹಾಗೂ ಉಳಿದ ಹುದ್ದೆಗಳಿಗೆ ರೂ. 200/- +ಜಿ.ಎಸ್.ಟಿ ರೂ.36/- ಒಟ್ಟು ರೂ.236/-ನ್ನು CEO, ATHMASHAKTHI MULTIPURPOSE CO OPERATIVE SOCIETY LTD

MANGALORE ರವರ ಹೆಸರಿಗೆ ಯಾವುದಾದರೂ ವಾಣಿಜ್ಯ ಬ್ಯಾಂಕು ಅಥವಾ ಸಹಕಾರಿ ಬ್ಯಾಂಕುಗಳಿಂದ ಪಡೆಯಲಾದ ಡಿ.ಡಿ ಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸತಕ್ಕದು.

7. ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಗೆ ಹುದ್ದೆಯ ಕ್ರಮ ಸಂಖ್ಯೆ 01 ರಿಂದ 02 ರವರೆಗಿನ ಹುದ್ದೆಗಳಿಗೆ ರೂ. 500/- +ಜಿ.ಎಸ್.ಟಿ ರೂ.90/- ಒಟ್ಟು ರೂ.590/-ನ್ನು , ಕ್ರಮ ಸಂಖ್ಯೆ 03 ರಿಂದ 05 ರವರೆಗಿನ ಹುದ್ದೆಗಳಿಗೆ ರೂ. 300/- +ಜಿ.ಎಸ್.ಟಿ ರೂ.54/- ಒಟ್ಟು ರೂ.354/-ನ್ನು, ಕ್ರಮ ಸಂಖ್ಯೆ 06 ರಿಂದ 07 ರವರೆಗಿನ ಹುದ್ದೆಗಳಿಗೆ ರೂ. 100/- +ಜಿ.ಎಸ್.ಟಿ ರೂ.18/- ಒಟ್ಟು ರೂ.118/-ನ್ನು, CEO, ATHMASHAKTHI MULTIPURPOSE CO OPERATIVE SOCIETY LTD MANGALORE ರವರ ಹೆಸರಿಗೆ ಯಾವುದಾದರೂ ವಾಣಿಜ್ಯ ಬ್ಯಾಂಕು ಅಥವಾ ಸಹಕಾರಿ ಬ್ಯಾಂಕುಗಳಿಂದ ಪಡೆಯಲಾದ ಡಿ.ಡಿ ಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸತಕ್ಕದು.

**<u>ವಿ.ಸೂ:-</u>** ಕಾರಣಾಂತರಗಳಿಂದ ಈ ನೇಮಕಾತಿಯು ರದ್ದಾದಲ್ಲಿ ಅರ್ಜಿ ಶುಲ್ಕವನ್ನು ವಾಪಸ್ಸು ಕೊಡಲಾಗುವುದಿಲ್ಲ.

8. ಅಭ್ಯರ್ಥಿಗಳು ವಯೋಮಿತಿ ಹಾಗೂ ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಸ್ವಯಂ ದೃಢೀಕೃತ ದಾಖಲೆಗಳನ್ನು ಸಲ್ಲಿಸಬೇಕು.

9. **<u>ಅರ್ಹತಾ ಷರತ್ತುಗಳು :</u>**

**(ಅ)** ಭಾರತೀಯ ನಾಗರಿಕನಾಗಿರತಕ್ಕದ್ದು.

**(ಆ)** ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

**(ಇ)** ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತಾ ಷರತ್ತುಗಳು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

10. **<u>ಆಯ್ಕೆ ವಿಧಾನ :</u>**

- ಕಚೇರಿ ಅಧೀಕ್ಷಕರು/ಮಾನವ ಸಂಪನ್ಮೂಲಾಧಿಕಾರಿ, ಲೆಕ್ಕಿಗರು, ಶಾಖಾ ವ್ಯವಸ್ಥಾಪಕರು/ಶಾಖಾಧಿಕಾರಿ, ಹಿರಿಯ ಗುಮಾಸ್ತರು, ಕಿರಿಯ ಗುಮಾಸ್ತರು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅರ್ಹ ಎಲ್ಲಾ ಅಭ್ಯರ್ಥಿಗಳಿಗೆ ಈ ಕೆಳಕಂಡ ವಿಷಯಗಳ ಕುರಿತಂತೆ 200 ಅಂಕಗಳ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು.

**<u>ಲಿಖಿತ ಪರೀಕ್ಷೆಯ ವಿಷಯಗಳು :-</u>**

| | |
|---|---|
| 1. ಕನ್ನಡ ಭಾಷೆ | - 50 ಅಂಕಗಳು |
| 2. ಸಾಮಾನ್ಯ ಜ್ಞಾನ | - 25 ಅಂಕಗಳು |
| 3. ಇಂಗ್ಲೀಷ್ ಭಾಷೆ | - 25 ಅಂಕಗಳು |
| 4. ಸಹಕಾರ | - 50 ಅಂಕಗಳು |
| 5. ಭಾರತದ ಸಂವಿಧಾನ | - 25 ಅಂಕಗಳು |
| 6. ಸಮಾಜದ ಯುಕ್ತವಾದ ಚಟುವಟಿಕೆ | - 25 ಅಂಕಗಳು |

ಲಿಖಿತ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಒಟ್ಟು ಅಂಕಗಳನ್ನು ಶೇಕಡಾ 85 ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆಧರಿಸಿ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ನಿಗದಿಪಡಿಸಿದ ಅಂಕಗಳು 15, ಆಗಿದ್ದು ಲಿಖಿತ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಕೂಡಿಸಿ ಅರ್ಹತಾ ಪಟ್ಟಿ ತಯಾರಿಸಿ ಆಯ್ಕೆ ಪಟ್ಟಿ (MERIT LIST) ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

ಉದ್ಯೋಗ ನೇಮಕಾತಿ ಸಮಿತಿ ಪುತ್ತೂರು ... 575007 ಆಡಳಿತ ಕಛೇರಿ

- ಕಚೇರಿ ಅಧೀಕ್ಷಕರು/ಮಾನವ ಸಂಪನ್ಮೂಲಾಧಿಕಾರಿ, ಲೆಕ್ಕಿಗರು, ಶಾಖಾ ವ್ಯವಸ್ಥಾಪಕರು/ಶಾಖಾಧಿಕಾರಿ, ಹಿರಿಯ ಗುಮಾಸ್ತರು, ಕಿರಿಯ ಗುಮಾಸ್ತರು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಗಣಕಯಂತ್ರ ತರಬೇತಿಯನ್ನು ಹೊಂದಿರಬೇಕು. ಈ ಮೇಲ್ಕಂಡ ಎಲ್ಲಾ ಹುದ್ದೆಗಳಿಗೆ HDCM ಅಥವಾ GDC ಯಲ್ಲಿ ತೇರ್ಗಡೆ ಹೊಂದಿದವರಿಗೆ ಹಾಗೂ ಸಹಕಾರ ಸಂಘ/ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿ ಅನುಭವ ಹೊಂದಿರುವವರಿಗೆ ಆದ್ಯತೆಯನ್ನು ನೀಡಲಾಗುವುದು. ಈ ಸಂಬಂಧ ಅಗತ್ಯ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
- ವಾಹನ ಚಾಲಕ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಲಘು ವಾಹನ ಚಾಲನಾ ಪರವಾನಿಗೆ ಹೊಂದಿರಬೇಕು.

## 11. ಶೈಕ್ಷಣಿಕ ವಿದ್ಯಾರ್ಹತೆ, ವಯೋಮಿತಿ ಮತ್ತು ವೇತನ ಶ್ರೇಣಿ :-

(ಅ)ಕಚೇರಿ ಅಧೀಕ್ಷಕರು /ಮಾನವ ಸಂಪನ್ಮೂಲಾಧಿಕಾರಿ ಹುದ್ದೆಗೆ ವಿದ್ಯಾರ್ಹತೆ :

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾನಿಲಯದ ಎಂ.ಕಾಂ/ಎಂ.ಬಿ.ಎ/ ಎಮ್.ಎಸ್.ಡಬ್ಲೂ ಸ್ನಾತಕೋತ್ತರ ಪದವಿಯಲ್ಲಿ ತೇರ್ಗಡೆ ಹೊಂದಿರಬೇಕು ಕನಿಷ್ಟ ಶೇ. 50ರಷ್ಟು ಅಂಕಗಳನ್ನು ಪಡೆದಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು ಈ ಬಗ್ಗೆ ಸೂಕ್ತ ಪ್ರಮಾಣ ಪತ್ರ ಸಲ್ಲಿಸಬೇಕು.

(ಆ)ಲೆಕ್ಕಿಗರು ಹುದ್ದೆಗಳಿಗೆ ವಿದ್ಯಾರ್ಹತೆ :

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾನಿಲಯದ ಬಿ.ಕಾಂ/ಬಿ.ಬಿ.ಎ ,ಎಂ.ಕಾಂ/ಎಂ.ಬಿ.ಎ ಪದವಿಯಲ್ಲಿ ತೇರ್ಗಡೆ ಹೊಂದಿರಬೇಕು ಕನಿಷ್ಟ ಶೇ. 50ರಷ್ಟು ಅಂಕಗಳನ್ನು ಪಡೆದಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು ಈ ಬಗ್ಗೆ ಸೂಕ್ತ ಪ್ರಮಾಣ ಪತ್ರ ಸಲ್ಲಿಸಬೇಕು.

(ಇ)ಶಾಖಾಧಿಕಾರಿ/ಹಿರಿಯ ಗುಮಾಸ್ತರು ,ಕಿರಿಯ ಗುಮಾಸ್ತರು ಹುದ್ದೆಗಳಿಗೆ ವಿದ್ಯಾರ್ಹತೆ :

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾನಿಲಯದ ಬಿ.ಕಾಂ/ಬಿ.ಬಿ.ಎ ಪದವಿಯಲ್ಲಿ ತೇರ್ಗಡೆ ಹೊಂದಿರಬೇಕು ಕನಿಷ್ಟ ಶೇ. 50ರಷ್ಟು ಅಂಕಗಳನ್ನು ಪಡೆದಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು ಈ ಬಗ್ಗೆ ಸೂಕ್ತ ಪ್ರಮಾಣ ಪತ್ರ ಸಲ್ಲಿಸಬೇಕು.

(ಈ) ಜವಾನ ಮತ್ತು ವಾಹನ ಚಾಲಕ ಹುದ್ದೆಗಳಿಗೆ ವಿದ್ಯಾರ್ಹತೆ :

ಜವಾನ ಹುದ್ದೆಗೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕರ್ನಾಟಕ ಸರ್ಕಾರದ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು

ವಾಹನ ಚಾಲಕ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕರ್ನಾಟಕ ಸರ್ಕಾರದ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಲಘು ವಾಹನ ಚಾಲನಾ ಪರವಾನಿಗೆ ಹೊಂದಿರಬೇಕು ಹಾಗೂ ಕನಿಷ್ಟ 2 ವರ್ಷಗಳ ಕಾಲ ವಾಹನ ಚಾಲನೆ ಅನುಭವ ಇರತಕ್ಕದ್ದು.

**ವಯೋಮಿತಿ :** ನೇಮಕಾತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯ ಗರಿಷ್ಠ ವಯೋಮಿತಿಯು ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದವರಾಗಿದ್ದರೆ 40 ವರ್ಷ, ಇತರ ಹಿಂದುಳಿದ ಜಾತಿ ಮತ್ತು ವರ್ಗ ದವರಿಗೆ 38 ವರ್ಷ ಹಾಗೂ ಇತರರು 35 ವರ್ಷ ವಯೋಮಿತಿಯನ್ನು ಮೀರಿರಬಾರದು.

**ಸಂಘದೊಂದಿಗೆ ಪತ್ರ ವ್ಯವಹಾರ :**

ವಿಳಾಸ ಬದಲಾವಣೆ ಇದ್ದಲ್ಲಿ ಮಾತ್ರ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಸೀಮಿತ ಅವಧಿಯ ಒಳಗೆ ಸಂಘದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಸಂಘವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಸಂಘವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಸಂಘದೊಂದಿಗೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಈ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು.

(1) ಹುದ್ದೆಯ ಹೆಸರು

(2) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(3) ಅರ್ಜಿಯಲ್ಲಿ ನಮೂದಿಸಿರುವ ಅಂಚೆಯ ವಿಳಾಸ

ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ಶಾಲೆಯ ವರ್ಗಾವಣಾ ಪ್ರಮಾಣ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.

ಕಡ್ಡಾಯವಾಗಿ ಲಗತ್ತಿಸಬೇಕಾದ ಪ್ರಮಾಣ ಪತ್ರಗಳು :

(1) ವಿವಿಧ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳು.

(2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ಶಾಲೆಯ ವರ್ಗಾವಣಾ ಪ್ರಮಾಣ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.

(3) ಸೇವಾ ಅನುಭವ ನಿಗದಿಪಡಿಸಿದ ಹುದ್ದೆಗಳಿಗೆ ಈ ಬಗ್ಗೆ ಸಂಬಂಧಿಸಿದ ಸಂಸ್ಥೆಯಿಂದ ಪಡೆದ ದೃಢೀಕರಣ ಪತ್ರ.

**ಪ್ರಮುಖ ಸೂಚನೆಗಳು**

1) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ಜನ್ಮ ದಿನಾಂಕ, ವಿದ್ಯಾರ್ಹತೆ, ಹಾಗೂ ಅನುಭವ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

2) ಅಪೂರ್ಣವಾಗಿರುವ, ಸಹಿ ಮಾಡದೇ ಇರುವ , ಸ್ವಯಂ ದೃಢೀಕರಿಸದೇ ಇರುವ ಹಾಗೂ ತಿದ್ದುಪಡಿ ಮಾಡಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

4) ಅಭ್ಯರ್ಥಿಗಳ ಅರ್ಹತೆ ಬಗ್ಗೆ ಸಂಘದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮ ಎಂದು ಪರಿಗಣಿಸಲಾಗುವುದು ಇದಕ್ಕೆ ಅಭ್ಯರ್ಥಿ ಬದ್ಧನಾಗಿರಬೇಕು. ಈ ನೇಮಕಾತಿ ಪ್ರಕಟಣೆಯನ್ನು ಕಾರಣಾಂತರಗಳಿಗಾಗಿ ರದ್ದು ಪಡಿಸುವ ಅಧಿಕಾರವನ್ನು ಸಂಘವು ಹೊಂದಿರುತ್ತದೆ.

5) ಆಯ್ಕೆಗೊಂಡ ಅಭ್ಯರ್ಥಿಗಳನ್ನು ಪ್ರಾರಂಭದಲ್ಲಿ ಎರಡು ವರ್ಷಗಳ ಕರಾರು ಪತ್ರದ ಜೊತೆಗೆ ಪರೀಕ್ಷಾರ್ಥ ಅವಧಿಗೆ ನೇಮಕಾತಿ ಮಾಡಲಾಗುವುದು. ಅವಶ್ಯಕವಿದ್ದಲ್ಲಿ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಸೇವೆಯನ್ನು ಖಾಯಂಗೊಳಿಸಲಾಗುವುದು ಹಾಗೂ ಅಗತ್ಯ ಸಂದರ್ಭದಲ್ಲಿ ಸಂಘದ ಪ್ರಚಾರ ಕಾರ್ಯಗಳಲ್ಲಿ ಭಾಗಿಯಾಗಲು ಬದ್ಧರಿರತಕ್ಕದ್ದು.

6) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಸಂಘವು ಕಾಯ್ದಿರಿಸಿಕೊಂಡಿದೆ.

7) ಸಂಘದ ಯಾವುದೇ ಶಾಖೆಯಲ್ಲಿ ಕಾರ್ಯ ನಿರ್ವಹಿಸಲು ಬದ್ಧರಿರತಕ್ಕದ್ದು.

ಈ ಪ್ರಕಟನೆಯಲ್ಲಿ ಪ್ರಕಟಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.

**ದುರ್ನಡತೆ :**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವುವನೆಂದು ಅಥವಾ ಖೋಟಾ ದಾಸ್ತಾವೇಜು ಅಥವಾ ತಿದ್ದಲಾದ ದಾಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವನ ನೇಮಕಾತಿಯ ಸಂದರ್ಶನದಿಂದ/ ಆಯ್ಕೆಯಿಂದ ತಿಳಿದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು. ಮುಂದೆ ಸಂಘವು ನೇಮಕಾತಿ ಮಾಡುವ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಅನರ್ಹ ಮಾಡಲಾಗುವುದು. ಅಭ್ಯರ್ಥಿಯು ನೀಡಿರುವ ಅಂಕಪಟ್ಟಿಯನ್ನು ಸಂಬಂಧಪಟ್ಟ ವಿಶ್ವವಿದ್ಯಾನಿಲಯಕ್ಕೆ ಕಳುಹಿಸಿ ಪ್ರಮಾಣಪತ್ರ ನೈಜತೆಯ ಬಗ್ಗೆ ಪರಿಶೀಲನೆಯನ್ನು ಕೈಗೊಳ್ಳಲಾಗುವುದು. ನೀಡಿರುವ ಪ್ರಮಾಣ ಪತ್ರವು ನಕಲಿಯೆಂದು ಸಂಬಂಧಪಟ್ಟ ವಿಶ್ವವಿದ್ಯಾನಿಲಯವು ಧೃಡೀಕರಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳ ವಿರುದ್ಧ ಯಾವುದೇ ವಿಚಾರಣೆಯನ್ನು ನಡೆಸದೆ CRPC ಕಾಯಿದೆಯಡಿಯಲ್ಲಿ ಕ್ರಮಕ್ಕೈಗೊಳ್ಳಲಾಗುವುದು.

**ನಿರ್ಬಂಧ :**

1) ಯಾವುದೇ ನಿಷೇದಿತ ಸಂಘ ಸಂಸ್ಥೆಯ ಸದಸ್ಯಳಾಗಿದ್ದಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇದಿತ ಸಂಸ್ಥೆಯ ಕಾರ್ಯ ಚಟುವಟಿಕೆಯಲ್ಲಿ ಸಕ್ರೀಯವಾಗಿ ಭಾಗವಹಿಸಿದ್ದಲ್ಲಿ.
2) ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾದಲ್ಲಿ.
3) ಕಾನೂನು ಭಂಗ ಮಾಡಿ ಹಿಂಸಾಕೃತ್ಯದಲ್ಲಿ ತೊಡಗಿಕೊಂಡಿದ್ದಲ್ಲಿ.
4) ಭಾರತ ದೇಶದ ಸಾರ್ವಭೌಮ ಹಾಗೂ ಸುಭದತ್ರೆಗೆ ದಕ್ಕೆ ತರುವ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಲ್ಲಿ.
5) ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರ ಹಾಗೂ ಸಹಕಾರ ಸಂಘ ಸಂಸ್ಥೆಗಳ ಸೇವೆಯಿಂದ ಉಚ್ಚಾಟನೆಗೊಂಡಿದ್ದಲ್ಲಿ.
6) ವ್ಯಕ್ತಿಯು ನ್ಯಾಯಬಾಹಿರ ಹೊಂದಿರುವ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.

For Athmashakthi Multipurpose Co-op.
Society Ltd.

Chief Executive Officer

ಸಹಿ/-

ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ನೇಮಕಾತಿ ಸಮಿತಿಯ ಸದಸ್ಯ ಕಾರ್ಯದರ್ಶಿ
ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘ ನಿ.
ಪಡೀಲ್ ಮಂಗಳೂರು-07